ಕಾರವಾರ ಮತ್ತು ಬಿಜಾಪುರಗಳಲ್ಲಿ ಸ್ನಾತಕೋತ್ತರ ಕೇಂದ್ರಗಳನ್ನು ಪ್ರಾರಂಭಿಸುವುದರ ಬಗ್ಗೆ

2866 - ಶ್ರೀ ಪ್ರಭಾಕರ ಎಸ್. ರಾಣೆ (ಕಾರವಾರ) : ಮಾನ್ಯ ಶಿಕ್ಷಣ ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಾರವಾರ ಮತ್ತು ಬಿಜಾಪುರಗಲಲ್ಲಿ ಸ್ನಾತಕೋತ್ತರ ಕೇಂದ್ರಗಳನ್ನು ಪ್ರಾರಂಭಿಸಲು ಕರ್ನಾಟಕ ವಿಶ್ವವಿದ್ಯಾಲಯವು ಸರ್ಕಾರಕ್ಕೆ ಈ ಹಿಂದೆ ಮನವಿ ಸಲ್ಲಿಸಿರುವುದೇ?

ಆ) ಹಾಗಿದ್ದಲ್ಲಿ ಈ ಸ್ನಾತಕೋತ್ತರ ಕೇಂದ್ರಗಳನ್ನು ಪ್ರಾರಂಭಿಸಲು ಸರ್ಕಾರ ಕೈಗೊಂಡ ಕ್ರಮವೇನು?

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮತ್ತು ಸಂಸದೀಯ ವ್ಯವಹಾರಗಳ ಸಚಿವರು) :

ಅ) ಹೌದು.

ಆ) ಈಗಾಗಲೇ ಕಾರವಾರದಲ್ಲಿ ಕಡಲ ಜೀವಶಾಸ್ತ್ರದ ಅಧ್ಯಯನ ವಿಭಾಗವಿದೆ. ಆರ್ಥಿಕ ಮುಗ್ಗಟ್ಟಿನ ದೃಷ್ಟಿಯಿಂದಾಗಿ ಸದ್ಯಕ್ಕೆ ಮುಂದೂಡಿದೆ.

ಪಂಪುಸೆಟ್ಟುಗಳಿಗೆ ವಿದ್ಯುತ್ ಸರಬರಾಜು ಮಾಡುವ ಬಗ್ಗೆ

2797 - ಶ್ರೀ ಎಂ.ವಿ. ವೆಂಕಟಪ್ಪ (ಮುಳಬಾಗಲು) : ಮಾನ್ಯ ಇಂಧನ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ರೈತರ ಪಂಪುಸೆಟ್ಟುಗಳಿಗೆ ದಿನಕ್ಕೆ ಎಷ್ಟು ಗಂಟೆಗಳ ಕಾಲ ವಿದ್ಯುಚ್ಛಕ್ತಿ ಒದಗಿಸಲಾಗುತ್ತಿದೆ?

ಆ) ರಾಜ್ಯಾದ್ಯಂತ ಮತ್ತು ಅದರಲ್ಲೂ ಕೋಲಾರ ಜಿಲ್ಲೆಯಲ್ಲಿ ಕನಿಷ್ಟ ಮೂರು ಗಂಟೆಯು ಸಹಾ ವಿದ್ಯುಚ್ಛಕ್ತಿ ಒದಗಿಸದಿರುವ ಪ್ರಯುಕ್ತ ರೈತರು ಕಂಗಾಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಬಂದಿದ್ದಲ್ಲಿ ಕನಿಷ್ಟ 12 ಗಂಟೆಯಾದರೂ ವಿದ್ಯುಚ್ಛಕ್ತಿ ಒದಗಿಸಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ಎಂ. ರಾಮಪ್ಪ (ಇಂಧನ ರಾಜ್ಯ ಮಂತ್ರಿಗಳು) :

ಅ) ರಾಜ್ಯದಲ್ಲಿ ರೈತರ ಪಂಪುಸೆಟ್ಟುಗಳಿಗೆ ದಿನವಿಡಿ ವಿದ್ಯುತ್ ಸರಬರಾಜನ್ನು ಮಾಡಲಾಗುತ್ತಿದೆ. ಆದರೆ ಕೆಲವು ಪ್ರದೇಶಗಳಲ್ಲಿ ಕೆಲವು ಅನಿವಾರ್ಯ ಸ್ಥಳೀಯ ತಾಂತ್ರಿಕ ಕಾರಣಗಳಿಂದ ನಿಯಮಿತ ಲೋಡ್ ಷೆಡ್ಡಿಂಗ್‌ನ್ನು ಮಾಡಲಾಗುತ್ತಿದೆ. ಈ ನಿಯಮಿತ ಲೋಡ್ ಷೆಡ್ಡಿಂಗ್‌ನ ಅವಧಿಯನ್ನು ಅದಷ್ಟು ಕಡಿಮೆಗೊಳಿಸಲು ಮಂಡಳಿಯು ಶ್ರಮಿಸುತ್ತಿರುತ್ತದೆ.

ಆ) ಕೋಲಾರ ಜಿಲ್ಲೆಯಲ್ಲಿ ದಿನವಹಿ 15 ರಿಂದ 18 ಗಂಟೆಗಳ ಕಾಲ ವಿದ್ಯುಚ್ಛಕ್ತಿಯನ್ನು ಈಗ ಒದಗಿಸಲಾಗುತ್ತಿದೆ.

ಇ) ಕೋಲಾರ ಜಿಲ್ಲೆಯಲ್ಲಿ ಮಂಡಳಿಯು ಹಲವಾರು ಹೊಸ ಉಪ ವಿದ್ಯುತ್ ಕೇಂದ್ರಗಳನ್ನು ನಿರ್ಮಾಣ ಮಾಡುತ್ತಿದೆ. ಇದರಿಂದ ವಿದ್ಯುತ್ ಸರಬರಾಜಿನ ಪರಿಸ್ಥಿತಿ ಗುಣಮಟ್ಟದಲ್ಲಿ ಬಹಳ ಸುಧಾರಣೆ ಉಂಟಾಗುತ್ತದೆ.